**Bangalore**
**Regional News**
**10.03.2026 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆ ಸ್ಥಗಿತ; ಮಧ್ಯಪ್ರವೇಶಿಸುವಂತೆ ಕೇಂದ್ರಕ್ಕೆ ಪತ್ರ ಬರೆದ ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಗೃಹಬಳಕೆಗೆ ದೇಶೀಯ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಿದ ಕೇಂದ್ರ ಸರ್ಕಾರ- ಇಂಟರ್ ಬುಕ್ಕಿಂಗ್‌ಗೆ ೨೫ ದಿನಗಳ ಅವಧಿ

೩. ವೈದ್ಯರ ಬೇಡಿಕೆ ಈಡೇರಿಸಲು ಇಂದು ಮುಖ್ಯಮಂತ್ರಿಗಳ ಜೊತೆ ಮತ್ತೊಂದು ಸುತ್ತಿನ ಸಭೆ- ಸಚಿವ ದಿನೇಶ್ ಗುಂಡೂರಾವ್

೪. ರಾಜ್ಯದಲ್ಲಿ ಬಂಡವಾಳ ಹೂಡಿಕೆ, ಉದ್ಯೋಗ ಸೃಜನೆಗಾಗಿ ಸರ್ಕಾರದಿಂದ ೧೧೮ ಹೂಡಿಕೆ ಒಪ್ಪಂದ

೫. ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ವಿಷಪೂರಿತ ನೀರು ಪೂರೈಕೆ ಆರೋಪ- ಸದನದಲ್ಲಿ ಗಮನ ಸೆಳೆದ ಮುಳಬಾಗಿಲು ಶಾಸಕ

**<><*<><>*><>**

ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ಅವರಿಗೆ ಪತ್ರ ಬರೆದಿದ್ದಾರೆ. ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ, ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿದ್ದಾರೆ. ಗೃಹಬಳಕೆಯ ಸಿಲಿಂಡರ್ ಪೂರೈಕೆಗೂ ಆದ್ಯತೆ ನೀಡುವಂತೆ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿ ಕೆಲವು ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಸಿಲಿಂಡರ್ ಪೂರೈಕೆಯ ಕೊರತೆಯಿಂದ ಮುಚ್ಚುವ ಹಂತಕ್ಕೆ ತಲುಪಿವೆ. ಇದರಿಂದ ರಾಜಧಾನಿ ಬೆಂಗಳೂರಿನ ಲಕ್ಷಾಂತರ ಮಂದಿ ಸಂಕಷ್ಟಕ್ಕೆ ಸಿಲುಕುವ ಅಪಾಯವಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಬೆಂಗಳೂರಿನಂತಹ ನಗರ ದೊಡ್ಡ ಪ್ರಮಾಣದಲ್ಲಿ ವಾಣಿಜ್ಯ ಬಳಕೆಯ ಸಿಲಿಂಡರ್ ಅವಲಂಬಿತವಾಗಿರುವುದರಿಂದ ಕೂಡಲೇ ಮಧ್ಯಪ್ರವೇಶಿಸುವಂತೆ ಒತ್ತಾಯಿಸಿದ್ದಾರೆ.

**<><*<><>*><>**

ಕೇಂದ್ರ ಸರ್ಕಾರ ಗ್ಯಾಸ್ ಸಿಲಿಂಡರ್ ಬೆಲೆ ೬೦ ರೂಪಾಯಿಗೆ ಏರಿಸಿರುವುದನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಖಂಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಗ್ಗೆ ರಾಜ್ಯದ ಬಿಜೆಪಿ ಸಂಸದರು ಧ್ವನಿ ಎತ್ತುವಂತೆ ಆಗ್ರಹಿಸಿದ್ದಾರೆ. ಹೋಟೆಲ್ ಹಾಗೂ ಇತರ ಉದ್ದಿಮೆಗಳು ತೀವ್ರ ತೊಂದರೆಗೊಳಗಾಗಿದ್ದು, ಕೋಟ್ಯಂತರ ಮಹಿಳೆಯರ ಮೇಲೆ ಪರಿಣಾಮ ಬೀರಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿ ಆರು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನಲ್ಲಿ ಶಾಸಕರು ಹಾಗೂ ಸಂಸದರಿಗೆ ಔತಣ ಕೂಟ ಏರ್ಪಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಂಗಳೂರಿನ ಹೋಟೆಲ್‌ಗಳಿಗೆ ಸೋಮವಾರದಿಂದ ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಪೂರೈಕೆಯನ್ನು ದಿಢೀರನೆ ಸ್ಥಗಿತಗೊಳಿಸಲಾಗಿದೆ. ಗ್ಯಾಸ್ ಸರಬರಾಜಿನ ಕೊರತೆಯಿಂದಾಗಿ ನಗರದೆಲ್ಲೆಡೆ ಇರುವ ಹೋಟೆಲ್‌ಗಳು ನಾಳೆಯಿಂದ ಮುಚ್ಚಲು ನಿರ್ಧರಿಸಿವೆ. ಈ ವ್ಯತ್ಯಯದಿಂದ ದಿನನಿತ್ಯದ ಊಟಕ್ಕಾಗಿ ಹೋಟೆಲ್‌ಗಳ ಮೇಲೆ ಅವಲಂಬಿತರಾಗಿರುವ ಸಾಮಾನ್ಯ ಜನರು, ಹಿರಿಯ ನಾಗರಿಕರು, ವಿದ್ಯಾರ್ಥಿಗಳು ಹಾಗೂ ವೈದ್ಯಕೀಯ ವೃತ್ತಿಪರರಿಗೆ ತೊಂದರೆ ಉಂಟಾಗಲಿದೆ ಎನ್ನುವ ಭೀತಿ ಎದುರಾಗಿದೆ. ಈ ನಡುವೆ, ಕೇಂದ್ರ ಸಚಿವೆ ಶೋಭಾಕರಂದ್ಲಾಜೆ, ಸಂಸದ ತೇಜಸ್ವಿ ಸೂರ್ಯ, ಕೇಂದ್ರ ಪೆಟ್ರೋಲಿಯಂ ನೈಸರ್ಗಿಕ ಅನಿಲ ಸಚಿವರಾದ ಹರ್ದೀಪ್‌ಸಿಂಗ್ ಪುರಿ ಅವರಿಗೆ ಪ್ರತ್ಯೇಕವಾಗಿ ಪತ್ರ ಬರೆದಿದ್ದಾರೆ. ಪತ್ರದಲ್ಲಿ ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಕೊರತೆ ಎದುರಾಗಲಿದ್ದು, ಹೋಟೆಲ್ ಮತ್ತು ಆಹಾರ ಸೇವಾ ಕ್ಷೇತ್ರದಲ್ಲಿ ಆತಂಕ ಎದುರಾಗಿದೆ. ಹೋಟೆಲ್ ಹಾಗೂ ಆತಿಥ್ಯ ಕ್ಷೇತ್ರಕ್ಕೆ ನಿರಂತರ ಎಲ್‌ಪಿಜಿ ಪೂರೈಕೆ ಖಚಿತಪಡಿಸುವಂತೆ ಪತ್ರದಲ್ಲಿ ಮನವಿ ಮಾಡಿದ್ದಾರೆ.

<><*<><>*><>

ಕೇಂದ್ರ ಸರ್ಕಾರವು, ತೈಲ ಸಂಸ್ಕರಣಾಗಾರಗಳಿಗೆ ಹೆಚ್ಚಿನ ಎಲ್‌ಪಿಜಿ ಉತ್ಪಾದನೆಗಾಗಿ ಮತ್ತು ಹೆಚ್ಚುವರಿ ಉತ್ಪಾದನೆಯನ್ನು ದೇಶೀಯ ಬಳಕೆಗೆ ಬಳಸಲು ಆದೇಶ ಹೊರಡಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪೆಟ್ರೋಲಿಯಂ ಮತ್ತು ನೈಸರ್ಗಿಕ ಸಚಿವಾಲಯವು, ಕೇಂದ್ರ ಸರ್ಕಾರ ಮನೆಗಳಿಗೆ ದೇಶಿಯ ಎಲ್‌ಪಿಜಿ ಪೂರೈಕೆಗೆ ಆದ್ಯತೆ ನೀಡಿದೆ ಎಂದು ತಿಳಿಸಿದೆ. ಸಂಗ್ರಹಣೆ ಮತ್ತು ಕಾಳಸಂತೆಯಲ್ಲಿ ಮಾರಟ ತಪ್ಪಿಸಲು ೨೫ ದಿನಗಳ ಇಂಟರ್ ಬುಕ್ಕಿಂಗ್ ಅವಧಿಯನ್ನು ಪರಿಚಯಿಸಿದೆ. ಹೋಟೆಲ್ ಮತ್ತು ಇತರ ಕೈಗಾರಿಕೆಗಳಿಗಾಗಿ ಎಲ್‌ಪಿಜಿ ಪೂರೈಕೆ ಪ್ರಾತಿನಿಧ್ಯ ಪರಿಶೀಲಿಸಲು ತೈಲ ಮಾರುಕಟ್ಟೆ ಕಂಪನಿಗಳ ಮೂರು ಕಾರ್ಯನಿರ್ವಹಕಾ ನಿರ್ದೇಶಕರ ಸಮಿತಿಯನ್ನು ರಚಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ಸ್ಥಿರವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಲ್ಫ್ ದೇಶಗಳಿಂದ ಎಲ್‌ಪಿಜಿ ಪೂರೈಕೆಯಲ್ಲಿ ತಾತ್ಕಾಲಿಕ ಅಡಚಣೆ ಉಂಟಾಗಿದೆ. ಆದರೆ ಮುಂದಿನ ವಾರದ ವೇಳೆಗೆ ಅದು ಪುನರಾಂಭವಾಗುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ. ಪರಿಸ್ಥಿತಿಯನ್ನು ಬಗೆಹರಿಸಲು ಕೇಂದ್ರ ಸರ್ಕಾರ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

<><*<><>*><>

ಜನಸಾಮಾನ್ಯರ ಹಿತದೃಷ್ಟಿಯಿಂದ ವೈದ್ಯರ ಬೇಡಿಕೆ ಈಡೇರಿಸಲು ಸರ್ಕಾರ ಬದ್ಧವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ವಿಧಾನಸಭೆಯ ಶೂನ್ಯವೇಳೆಯಲ್ಲಿ ಪ್ರತಿಪಕ್ಷ ಸದಸ್ಯ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸಿ ಸರ್ಕಾರಿ ವೈದ್ಯರು ಕರೆ ನೀಡಿರುವ ಮುಷ್ಕರದಿಂದ ಜನಸಾಮಾನ್ಯರಿಗೆ ಆಗುವ ತೊಂದರೆ ನಿವಾರಿಸಲು ಕ್ರಮಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್ ವೈದ್ಯರ ಸಂಘದೊಂದಿಗೆ ಎರಡು ಬಾರಿ ಸಭೆ ನಡೆಸಲಾಗಿದೆ. ಮುಖ್ಯಮಂತ್ರಿ ಅವರೊಂದಿಗೆ ಇನ್ನೊಂದು ಸುತ್ತಿನ ಸಭೆ ನಡೆಸಿ ಅವರ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ೬ ಲಕ್ಷ ೭೦ ಸಾವಿರದ ೫೬೦ ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಹಾಗೂ ೨ ಲಕ್ಷ ೪೭ ಸಾವಿರದ ೫೭೧  ಉದ್ಯೋಗ ಸೃಜನೆಗಾಗಿ ೧೧೭ ಹೂಡಿಕೆ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ ಸಿಟಿ ರವಿ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಒಡಂಬಡಿಕೆ ಮಾಡಿಕೊಂಡಿರುವ ಯೋಜನೆಗಳ ಪೈಕಿ ೫೭ ಯೋಜನೆಗಳು ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಅನುಮೋದನೆ ಪಡೆದಿವೆ ಎಂದು ಹೇಳಿದ್ದಾರೆ. ಅನುಮೋದನೆಯಾಗಿರುವ ೫೭ ಯೋಜನೆಗಳ ಪೈಕಿ ೬ ಯೋಜನೆಗಳು ಅನುಷ್ಠಾನಗೊಂಡಿದ್ದು, ೬ ಸಾವಿರದ ೬೫೪ ಉದ್ಯೋಗ ಸೃಜನೆಯಾಗಿದೆ. ಬಾಕಿ ಯೋಜನೆಗಳು ಅನುಷ್ಠಾನ ಹಂತದಲ್ಲಿವೆ ಎಂದು ಸಚಿವ ಎಂ.ಬಿ.ಪಾಟೀಲ್ ಮಾಹಿತಿ ನೀಡಿದ್ದಾರೆ.

<><*<><>*><>

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಸದಸ್ಯ ಅರಗ ಜ್ಞಾನೇಂದ್ರ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಕಳೆ ಒಂದು ವರ್ಷದಲ್ಲಿ ೯೦೦ ಪೊಲೀಸ್ ಸಬ್ ಇನ್ಸ್ಪೆಕ್ಟರ್ ಹುದ್ದೆಗಳನ್ನು ನೇಮಕ ಮಾಡಲಾಗಿದೆ. ಹತ್ತು ಸಾವಿರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆ ನೇಮಕಕ್ಕೆ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಶಿವಮೊಗ್ಗ ಜಿಲ್ಲೆ ವ್ಯಾಪ್ತಿಯಲ್ಲಿ ೩೩ ಪೊಲೀಸ್ ಠಾಣೆಗಳಿದ್ದು. ತೀರ್ಥಹಳ್ಳಿಯಲ್ಲಿ ಆರು ಪೊಲೀಸ್ ಠಾಣೆಗಳಿವೆ. ಶಿವಮೊಗ್ಗ ನಗರದಲ್ಲಿ ೩೦ ಸಾವಿರದ ೧೦೪, ತೀರ್ಥಹಳ್ಳಿಯಲ್ಲಿ ಮೂರು ಸಾವಿರ ಸಿಸಿ ಟಿವಿ ಕ್ಯಾಮರಾಗಳಿವೆ ಎಂದು ತಿಳಿಸಿದ್ದಾರೆ.

<><*<><>*><>

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಬೆಂಗಳೂರಿನ ವಿಷಪೂರಿತ ಕೊಳಚೆ ನೀರು ಪೂರೈಸಲಾಗುತ್ತಿದೆ ಎಂದು ಮುಳಬಾಗಿಲು ಕ್ಷೇತ್ರದ ಶಾಸಕ ಸಮೃದ್ಧಿ.ವಿ.ಮಂಜುನಾಥ್ ಸದನದಲ್ಲಿ ಗಮನ ಸೆಳೆದಿದ್ದಾರೆ. ಕೊಳಚೆ ನೀರು ಹಾಗೂ ಶುದ್ಧ ನೀರು ಪ್ರದರ್ಶಿಸಿ ಪ್ರತಿಭಟನೆ ನಡೆಸಿದ್ದಾರೆ. ವಿಧಾನಸಭೆ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಮಂಜುನಾಥ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಬೆಂಗಳೂರು ನಗರದ ತ್ಯಾಜ ನೀರನ್ನು ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ಎರಡು ಹಂತದಲ್ಲಿ ಸಂಸ್ಕರಿಸಿ ಕೆ.ಸಿ.ವ್ಯಾಲಿ ಯೋಜನೆ ಮೂಲಕ ಪಂಪ್ ಮಾಡಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳನ್ನು ತುಂಬಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಸಚಿವರ ಉತ್ತರದಿಂದ ಸಮಾಧಾನಗೊಳ್ಳದ ಸಮೃದ್ಧಿ.ವಿ.ಮಂಜುನಾಥ್ ಕೋಲಾರ ಚಿಕ್ಕಬಳ್ಳಾಪುರ ಕೆರೆಯ ನೀರನ್ನು ಪ್ರದರ್ಶಿಸಿ ತಮ್ಮ ಪ್ರತಿಭಟನೆ ದಾಖಲಿಸಿದರು. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಕೆ.ಸಿ.ವ್ಯಾಲಿ ಯೋಜನೆಯನ್ನು ವಿಶ್ವಬ್ಯಾಂಕ್, ವಿಶ್ವಸಂಸ್ಥೆ ಹಾಗೂ ಕೇಂದ್ರ ಸಂಸದೀಯ ಸಮಿತಿ ನಿಯೋಗ ಮುಕ್ತಕಂಠದಿಂದ ಶ್ಲಾಘಿಸಿದೆ. ಈ ಯೋಜನೆಗೆ ವಿಶ್ವಬ್ಯಾಂಕ್ ಸಾಲ ನೀಡಲು ಮುಂದೆ ಬಂದಿದೆ ಎಂದರು. ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಭಾಗದ ಜನಪ್ರತಿನಿಧಿಗಳನ್ನು ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿಗಳ ಸಭೆ ಕರೆದು ಜನರ ಸಂಶಯ ಬಗೆಹರಿಸಲು ಕ್ರಮಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

<><*<><>*><>

ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳಗಂಗೋತ್ರಿ ಕ್ಯಾಂಪಸ್‌ನಲ್ಲಿ ಪಕ್ಷಿಗಳ ಸಮೀಕ್ಷೆ ನಡೆಸಿದ ವಿದ್ಯಾರ್ಥಿಗಳ ತಂಡಕ್ಕೆ ೧೦೨ ಪಕ್ಷಿ ಪ್ರಭೇದಗಳು ಕಾಣಸಿಕ್ಕಿವೆ. ಪಕ್ಷಿಗಳ ಹುಡುಕಾಟದ ವೇಳೆ ಈ ಹಿಂದೆ ಕಾಣ ಸಿಗುತ್ತಿದ್ದ ಮೈನಾ, ಗುಬ್ಬಚ್ಚಿಗಳು ಸೇರಿದಂತೆ ಹಲವು ಪಕ್ಷಿಗಳು ಕ್ಯಾಂಪಸ್‌ನಿಂದ ದೂರವಾದ ಅಂಶವೂ ಬೆಳಕಿಗೆ ಬಂದಿವೆ.  ಮಂಗಳೂರು ವಿಶ್ವವಿದ್ಯಾನಿಲಯದ ಅನ್ವಯಿಕ ಪ್ರಾಣಿ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ.ಎಂ.ಎಸ್.ಮುಸ್ತಾಕ್, ಸಂಯೋಜಕ ಡಾ.ದೀಪಕ್ ನಾಯಕ್ ನೇತೃತ್ವದಲ್ಲಿ ೨೦ ಮಂದಿಯ ತಂಡ ಮಂಗಳೂರು ವಿವಿ ಕ್ಯಾಂಪಸ್ ಸುತ್ತಿ ಪಕ್ಷಿಗಳ ಅಧ್ಯಯನ ನಡೆಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>